**<u>ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂಡಾಧಿಕಾರಿಗಳು, ಬನಹಟ್ಟಿ.</u>**

***ಅಸಾ-2 (ಚಾಸಾ-2)***

<u>ದಿನಾಂಕ: 17-02-2023 ರಂದು ಸಾಕ್ಷಿ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**<u>ಮುಂದುವರಿದ ಮುಖ್ಯ ವಿಚಾರಣೆ : ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿಃ 24-10-2021 ರಂದು ಪೋಲಿಸರು ಮಹಾಲಿಂಗಪೂರ ಪೊಲಿಸ್ ಠಾಣೆಗೆ ನನ್ನನ್ನು ಮತ್ತು ಚಾಸಾ 3 ಇವರನ್ನು ಕರೆಸಿ, ಬಿಳಿ ಬಣ್ಣದ ಕಾರು ಮತ್ತು ದ್ವಿಚಕ್ರ ವಾಹನಗಳ ಪಂಚನಾಮೆಗಾಗಿ ಭಾವಚಿತ್ರಗಳನ್ನು ತೆಗೆದುಕೊಂಡ ನಂತರ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿ ವಾಹನ ತಡೆ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 6 ಎಂದು, ಸಾಕ್ಷಿ ಸಹಿಯನ್ನು ನಿಪಿ 6 ಎ ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿ ಜಪ್ತಿ ಪಂಚನಾಮೆ ಮೂಲಕ ತೆಗೆಯಲಾದ ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ 7 ಮತ್ತು 8 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು : 1 ನೇ ಆರೋಪಿ ಪರ ಶ್ರೀ ಎಸ್ ವಿ ಎಸ್ ವಕೀಲರಿಂದ</u>**

ನನ್ನ ಮುಂದುವರಿದ ಮುಖ್ಯ ವಿಚಾರಣೆಯಲ್ಲಿ ಹೇಳಿದ ಮಾಹಿತಿಗಳು ಸುಳ್ಳು ಎಂದರೆ ಸರಿಯಲ್ಲ. ನಿಪಿ 6 ಕ್ಕೆ ನಾನು ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಿಪಿ 6 ನ್ನು ಘಟನಾ ಸ್ಥಳದಲ್ಲಿ ಬರೆದಿರುತ್ತಾರೆ. ನಿಪಿ 6 ರಲ್ಲಿ ಬರೆದಿರುವ ಮಾಹಿತಿ ನನಗೆ ಇಲ್ಲ ಎಂದರೆ ಸರಿಯಲ್ಲ. ವಾಹನ ಜಪ್ತಿಪಡಿಸಿಕೊಂಡ ವಾಹನದ ನಂಬರ್ ನನಗೆ ಹೇಳಲು ಬರುವುದಿಲ್ಲ. ಘಟನಾ ಸ್ಥಳದಲ್ಲಿ ಎರಡು ವಾಹನಗಳು ಇದ್ದವು. ಪಿರ್ಯಾದುದಾರರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಘಟನೆಯ ಬಗ್ಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಪೋಲಿಸರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :</u>**

ಏನೂ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ನಿರ್ದೇಶನದಂತೆ ಬೆರಳಚ್ಚು ಮಾಡಿಸಲಾಯಿತು.)

ಓದಿ ಹೇ. ಕೇ. ಸರಿ ಅದೆ

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ. ದಂ., ಬನಹಟ್ಟಿ .

**<u>ಸಿ.ಸಿ. ಸಂ. 932/2022</u>**